ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

2

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನಸಭೆ ಸಚಿವಾಲಯ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE: 3/7/20

---

ವಿಕ 3/7/2020

## ಮೂರ್ತಿ ಮರುನೇಮಕಕ್ಕೆ ಆದೇಶ

**ಬೆಂಗಳೂರು:** ಅವ್ಯವಹಾರ ಆರೋಪದಲ್ಲಿ ಅಮಾನತುಗೊಂಡಿದ್ದ ವಿಧಾನಸಭೆಯ ಮಾಜಿ ಕಾರ್ಯದರ್ಶಿ ಎಸ್. ಮೂರ್ತಿ ಅವರನ್ನು ಇಲಾಖಾ ವಿಚಾರಣೆಗೆ ಒಳಪಟ್ಟು ಮರುನೇಮಕ ಮಾಡಿಕೊಳ್ಳು ವಂತೆ ಹೈಕೋರ್ಟ್ ಆದೇಶ ನೀಡಿದೆ.

ಈವರೆಗೂ ಇಲಾಖಾ ವಿಚಾರಣೆ ಪೂರ್ಣಗೊಳಿಸದ ಹಿನ್ನೆಲೆ ಯಲ್ಲಿ 3 ವಾರದೊಳಗೆ ಮರುನೇಮಕ ಮಾಡಿಕೊಳ್ಳಬೇಕು ಎಂದು ನ್ಯಾ. ಪವನ್ ಭಜಂತ್ರಿ ಅವರಿದ್ದ ಏಕಸದಸ್ಯ ಪೀಠ ಆದೇಶಿಸಿದೆ.

ವಿಧಾನಸಭೆ ಕಾರ್ಯದರ್ಶಿ ಹುದ್ದೆಯಿಂದ ಎಸ್. ಮೂರ್ತಿ ಅವರನ್ನು ಅಮಾನತುಗೊಳಿಸಿ ವಿಧಾನಸಭೆ ವಿಶೇಷ ಮಂಡಳಿ ಹೊರಡಿಸಿರುವ ಆದೇಶ ನಿಯಮಾನುಸಾರವಾಗಿಲ್ಲ. ಸರಕಾರಿ ನೌಕರರನ್ನು ಅಮಾನತುಪಡಿಸಿದ ಆರು ತಿಂಗಳ ಒಳಗೆ ಅವರ ವಿರುದ್ಧದ ಆರೋಪಗಳ ತನಿಖೆ ಪೂರ್ಣಗೊಳಿಸಬೇಕು. ಒಂದು ವೇಳೆ ತನಿಖೆ ಆರು ತಿಂಗಳಲ್ಲಿ ಪೂರ್ಣ ಮಾಡದಿದ್ದರೆ, ಅವರನ್ನು ಸೇವೆಗೆ ಮರು ನೇಮಕ ಮಾಡಬೇಕು. ಈ ಪ್ರಕರಣದಲ್ಲಿ ಒಂದೂವರೆ ವರ್ಷ ಕಳೆದರೂ ತನಿಖೆ ಪೂರ್ಣಗೊಳಿಸಿಲ್ಲ ಎಂದು ನ್ಯಾಯಾಲಯ ಹೇಳಿದೆ.

2019ರ ಫೆ.2ರಂದು 2 ವಾರದೊಳಗೆ ವಿವರಣೆ ನೀಡುವಂತೆ ಅರ್ಜಿದಾರರಿಗೆ ಸೂಚಿಸಲಾಗಿತ್ತು. ಅರ್ಜಿದಾರರು ವಿವರಣೆ ನೀಡುವ ಮುನ್ನವೇ 2019ರ ಫೆ.26ರಂದು ವಿಚಾರಣಾಧಿಕಾರಿ ನೇಮಿಸಲಾಗಿದೆ. 2019ರ ಮೇ 27ರಂದು ಅರ್ಜಿದಾರರರು ತಮ್ಮ ವಿರುದ್ಧದ ಆರೋಪಗಳಿಗೆ ಉತ್ತರ ನೀಡಿದ್ದಾರೆ. ವಿಚಾರಣಾ ಸಮಿತಿಯು ಅರ್ಜಿದಾರರ ವಿವರಣೆಗಳನ್ನು ಪರಿಗಣಿಸಿಲ್ಲ ಎಂಬುದು ಗೊತ್ತಾಗಿದೆ ಎಂದು ತೀರ್ಪಿನಲ್ಲಿ ತಿಳಿಸಲಾಗಿದೆ.